# ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
# KARNATAKA LEGISLATIVE ASSEMBLY RESEARCH AND REFERENCE BRANCH

## ಪತ್ರಿಕಾ ತುಣುಕುಗಳು
## PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಚುನಾವಣೆ

ಪತ್ರಿಕೆಯ ಹೆಸರು : NAME OF THE NEWS PAPER : ಉದಯವಾಣಿ    ದಿನಾಂಕ : DATE : 12/11/2019

# ಇಂದು ಲೋಕಲ್ ಫೈಟ್

12/11/19

## 2 ಮಹಾನಗರ ಪಾಲಿಕೆಗೂ ಇಂದೇ ಮತದಾನ

**ಬೆಂಗಳೂರು:** ಮಂಗಳೂರು, ದಾವಣಗೆರೆ ಮಹಾನಗರ ಪಾಲಿಕೆ ಸೇರಿದಂತೆ ರಾಜ್ಯದ 14 ನಗರ ಸ್ಥಳೀಯ ಸಂಸ್ಥೆಗಳ ಚುನಾವಣೆಗೆ ಮಂಗಳವಾರ (ನ.12) ಮತದಾನ ನಡೆಯಲಿದೆ. ರಾಜ್ಯ ಚುನಾವಣಾ ಆಯೋಗ ಮತದಾನಕ್ಕೆ ಎಲ್ಲ ಸಿದ್ಧತೆಗಳನ್ನು ಮಾಡಿಕೊಂಡಿದೆ.

ರಾಜ್ಯದ 2 ಮಹಾನಗರ ಪಾಲಿಕೆ, 6 ನಗರಸಭೆ, 3 ಪುರಸಭೆ ಹಾಗೂ 3 ಪಟ್ಟಣ ಪಂಚಾಯ್ತಿಗಳ 418 ವಾರ್ಡ್‌ಗಳ ಪೈಕಿ 409 ವಾರ್ಡ್‌ಗಳಲ್ಲಿ ಬೆಳಗ್ಗೆ 7ರಿಂದ ಸಂಜೆ 5 ಗಂಟೆವರೆಗೆ 1,388 ಮತಗಟ್ಟೆಗಳಲ್ಲಿ ಮತದಾನ ನಡೆಯಲಿದೆ.

ಒಟ್ಟು 13.04 ಲಕ್ಷ ಮತದಾರರು ಮತ ಚಲಾಯಿಸಲಿದ್ದಾರೆ. 9 ಅಭ್ಯರ್ಥಿಗಳು ಈಗಾಗಲೇ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. 1,587 ಅಭ್ಯರ್ಥಿಗಳು ಕಣದಲ್ಲಿದ್ದಾರೆ. ನ.14ರಂದು ಮತ ಎಣಿಕೆ ನಡೆಯಲಿದೆ.

ಅಲ್ಲದೇ, ವಿವಿಧ ಕಾರಣಗಳಿಂದ ತೆರವಾಗಿರುವ ಹಾಸನ ಜಿಲ್ಲೆ ಹೊಳೆನರಸೀಪುರ ಪುರಸಭೆಯ ವಾರ್ಡ್ ಸಂಖ್ಯೆ 4, ಚಾಮರಾಜನಗರ ಜಿಲ್ಲೆ ಕೊಳ್ಳೇಗಾಲ ಪುರಸಭೆಯ ವಾರ್ಡ್ ಸಂಖ್ಯೆ 19, ವಿಜಯಪುರ ಜಿಲ್ಲೆ ಚಡಚಣ ಪಟ್ಟಣ ಪಂಚಾಯಿತಿಯ ವಾರ್ಡ್ 5, ಬಾಗಲಕೋಟೆ ಜಿಲ್ಲೆ ಮಹಾಲಿಂಗಪುರ ಪುರಸಭೆಯ ವಾರ್ಡ್ 17 ಮತ್ತು ಕಲಬುರಗಿ ಜಿಲ್ಲೆ ಚಿತ್ತಾಪುರ ಪುರಸಭೆಯ ವಾರ್ಡ್ ಸಂಖ್ಯೆ 10ರ ಉಪ ಚುನಾವಣೆಗೆ ಇದೇ ವೇಳೆ ಮತದಾನ ನಡೆಯಲಿದೆ.

ಜೊತೆಗೆ, ಚಾಮರಾಜನಗರ ಜಿಲ್ಲೆಯ ಹರದನಹಳ್ಳಿ ಜಿಪಂ, ಯಳಂದೂರು ತಾಲೂಕಿನ ಯರಿಯೂರು ತಾಪಂ, ಉಡುಪಿ ಜಿಲ್ಲೆ ಬ್ರಹ್ಮಾವರ ತಾಲೂಕಿನ ಬಾರ್ಕೂರು, ಗದಗ ಜಿಲ್ಲೆ ಜಿಂಕದಕಟ್ಟಿ, ಕೊಪ್ಪಳ ಜಿಲ್ಲೆ ಕುಷ್ಟಗಿ ತಾಲೂಕಿನ ಜಮಲಾಪೂರ ತಾಪಂ ಕ್ಷೇತ್ರ ಹಾಗೂ ವಿವಿಧ 213 ಗ್ರಾಪಂ ಸದಸ್ಯ ಸ್ಥಾನಗಳಿಗೂ ಮಂಗಳವಾರವೇ ಮತದಾನ ನಡೆಯಲಿದೆ.

### ಉ ಮನವಿ

**ಮತದಾನ ಎಲ್ಲರ ಕರ್ತವ್ಯ. ದಯಮಾಡಿ ಎಲ್ಲರೂ ಮತದಾನದಲ್ಲಿ ಪಾಲ್ಗೊಂಡು ಪ್ರಜಾಪ್ರಭುತ್ವದ ಉಳಿವಿಗಾಗಿ ಕೈಜೋಡಿಸಿ. ನಿಮ್ಮದೊಂದು ಮತ ಸೂಕ್ತ ಅಭ್ಯರ್ಥಿಗಳ ಆಯ್ಕೆಗೆ ಕಾರಣವಾಗಿ, ಅಭಿವೃದ್ಧಿಗೆ ದಾರಿದೀಪವಾಗಬಲ್ಲದು.**

2